6. ಚುನಾವಣಾ ಪ್ರಸ್ತಾವಗಳು

ಶ್ರೀ ಎಂ.ಪಿ. ಪ್ರಕಾಶ್ (ಕಂದಾಯ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು):– ಮಾನ್ಯ ಅಧ್ಯಕ್ಷರೆ,

ಅ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 265(1)ನೇ ನಿಯಮದ ಅನುಸಾರವಾಗಿ ಈ ಸಭೆ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಆ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 268(1)ನೇ ನಿಯಮದ ಅನುಸಾರವಾಗಿ ಈ ಸಭೆ ಅಂದಾಜುಗಳ ಸಮಿತಿಗೆ ಹದಿನೆಂಟು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಇ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 271(1)ನೇ ನಿಯಮದ ಅನುಸಾರವಾಗಿ ಈ ಸಭೆ ಸಾರ್ವಜನಿಕ ಉದ್ದಿಮೆಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಈ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 272 (1)ನೇ ನಿಯಮದ ಅನುಸಾರವಾಗಿ ಈ ಸಭೆ ಹಕ್ಕುಭಾದ್ಯತಾ ಸಮಿತಿಗೆ ಒಂಬತ್ತು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಉ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 277(1)ಕ್ಕೆ ನಿಯಮದ ಅನುಸಾರವಾಗಿ ಈ ಸಭೆ ಅಧೀನ ಶಾಸನ ರಚನಾ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಊ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 281(1)ನೇ ನಿಯಮದ ಅನುಸಾರವಾಗಿ ಈ ಸಭೆ ಸರ್ಕಾರಿ ಭರವಸೆಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಋ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 283(1)ನೇ ನಿಯಮದ ಅನುಸಾರವಾಗಿ ಈ ಸಭೆ ಖಾಸಗಿ ಸದಸ್ಯರು ವಿಧೇಯಕಗಳ ಹಾಗೂ ನಿರ್ಣಯಗಳ ಸಮಿತಿಗೆ ಹತ್ತು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ೠ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 286ನೇ ನಿಯಮದ ಅನುಸಾರವಾಗಿ ಈ ಸಭೆ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಎ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 288ನೇ ನಿಯಮದ ಅನುಸಾರವಾಗಿ ಈ ಸಭೆ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಏ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಮತ್ತು ನಡವಳಿಕೆಯ 370(2)ನೇ ನಿಯಮದ ಅನುಸಾರವಾಗಿ ಈ ಸಭೆ ಸದನ ಸಮಿತಿ (ವಸತಿ ಸೌಕರ್ಯಗಳ ಸಮಿತಿ)ಗೆ ಹನ್ನೆರಡು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಐ) 1960ನೇ ಇಸವಿಯ ಅನಾಥಾಲಯ ಮತ್ತು ಧರ್ಮಸಂಸ್ಥೆಗಳು (ಮೇಲ್ವಿಚಾರಣೆ ಮತ್ತು ನಿಯಂತ್ರಣ) ಕಾಯ್ದೆ ಭಾಗ 2ರ ನಿಯಂತ್ರಣ ಮಂಡಳಿಯ ಅಧಿಕಾರಿ ಮತ್ತು ಕರ್ತವ್ಯದ ಸಂಖ್ಯೆ 5(2)ರ (ಎ), (ಬಿ)ಯ ಪ್ರಕಾರ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯ ಅನಾಥಾಲಯವನ್ನು ಧರ್ಮ ಸಂಸ್ಥೆಗಳು (ಮೇಲ್ವಿಚಾರಣೆ ಮತ್ತು ನಿಯಂತ್ರಣ) ಮಂಡಳಿಗೆ ಇಬ್ಬರು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಪ್ರಸ್ತಾಪ ಮಂಡಿಸಲ್ಪಟ್ಟಿತು

ಸಭಾಧ್ಯಕ್ಷರು:– ಪ್ರಸ್ತಾವ ಏನೆಂದರೆ:

ಅ) "ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 265(1)ನೇ ನಿಯಮದ ಅನುಸಾರವಾಗಿ ಈ ಸಭೆ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸುವುದು"

ಆ) "ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 268(1)ನೇ ನಿಯಮದ ಅನುಸಾರವಾಗಿ ಈ ಸಭೆ ಅಂದಾಜುಗಳ ಸಮಿತಿಗೆ ಹದಿನೆಂಟು ಜನ ಸದಸ್ಯರನ್ನು ಚುನಾಯಿಸುವುದು"

ಇ) "ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 271(1)ನೇ ನಿಯಮದ ಅನುಸಾರವಾಗಿ ಈ ಸಭೆ ಸಾರ್ವಜನಿಕ ಉದ್ದಿಮೆಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸುವುದು.

ಈ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 272 (1)ನೇ ನಿಯಮದ ಅನುಸಾರವಾಗಿ ಈ ಸಭೆ ಹಕ್ಕುಭಾದ್ಯತಾ ಸಮಿತಿಗೆ ಒಂಬತ್ತು ಜನ ಸದಸ್ಯರನ್ನು ಚುನಾಯಿಸುವುದು.

ಉ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 277(1)ನೇ ನಿಯಮದ ಅನುಸಾರವಾಗಿ ಈ ಸಭೆ ಅಧೀನ ಶಾಸನ ರಚನಾ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸುವುದು.

ಊ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 281(1)ನೇ ನಿಯಮದ ಅನುಸಾರವಾಗಿ ಈ ಸಭೆ ಸರ್ಕಾರಿ ಭರವಸೆಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸುವುದು.

ಋ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 283(1)ನೇ ನಿಯಮದ ಅನುಸಾರವಾಗಿ ಈ ಸಭೆ ಖಾಸಗಿ ಸದಸ್ಯರ ವಿಧೇಯಕಗಳ ಹಾಗೂ ನಿರ್ಣಯಗಳ ಸಮಿತಿಗೆ ಹತ್ತು ಜನ ಸದಸ್ಯರನ್ನು ಚುನಾಯಿಸುವುದು.

ೠ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 286ನೇ ನಿಯಮದ ಅನುಸಾರವಾಗಿ ಈ ಸಭೆ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸುವುದು.

ಎ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 288ನೇ ನಿಯಮದ ಅನುಸಾರವಾಗಿ ಈ ಸಭೆ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸುವುದು.

ಏ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಮತ್ತು ನಡವಳಿಕೆಯ 370(2)ನೇ ನಿಯಮದ ಅನುಸಾರವಾಗಿ ಈ ಸಭೆ ಸದನ ಸಮಿತಿ (ವಸತಿ ಸೌಕರ್ಯಗಳ ಸಮಿತಿ)ಗೆ ಹನ್ನೆರಡು ಜನ ಸದಸ್ಯರನ್ನು ಚುನಾಯಿಸುವುದು.

ಐ) 1960ನೇ ಇಸವಿಯ ಅನಾಥಾಲಯ ಮತ್ತು ಧರ್ಮಸಂಸ್ಥೆಗಳು (ಮೇಲ್ವಿಚಾರಣೆ ಮತ್ತು ನಿಯಂತ್ರಣ) ಕಾಯ್ದೆ ಭಾಗ 2ರ ನಿಯಂತ್ರಣ ಮಂಡಳಿಯ ಅಧಿಕಾರಿ ಮತ್ತು ಕರ್ತವ್ಯದ ಸಂಖ್ಯೆ 5(2)ರ (ಎ), (ಬಿ)ಯ ಪ್ರಕಾರ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯು ಅನಾಥಾಲಯವನ್ನು ಧರ್ಮ ಸಂಸ್ಥೆಗಳು (ಮೇಲ್ವಿಚಾರಣೆ ಮತ್ತು ನಿಯಂತ್ರಣ) ಮಂಡಳಿಗೆ ಇಬ್ಬರು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಅಧ್ಯಕ್ಷರು:– ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಇತರ ಸದಸ್ಯರು ಒಂದು ನಿಲುವಳಿ ಸೂಚನೆಯನ್ನು ಕೊಟ್ಟಿದ್ದಾರೆ. ಈಗ ಮಾನ್ಯ ವಿರೋಧ ಪಕ್ಷದ ನಾಯಕರು. ತಾವು ಮಾತನಾಡಿ.

7. ನಿಲುವಳಿ ಸೂಚನೆ

ವಿಷಯ:– ಕೂಲಿಗಾಗಿ ಕಾಳು–ಯೋಜನೆಯಡಿಯಲ್ಲಿ ನಡೆದಂಥ ಅವ್ಯವಹಾರದ ಕುರಿತು:–

+ಶ್ರೀ ಬಿ.ಎಸ್. ಯಡಿಯೂರಪ್ಪ (ವಿರೋಧ ಪಕ್ಷದ ನಾಯಕರು):– ಮಾನ್ಯ ಅಧ್ಯಕ್ಷರೆ, ಈ ರಾಜ್ಯದ ಕೋಟ್ಯಾಂತರ ಜನಕ್ಕೆ ಸಂಬಂಧಪಟ್ಟಂತೆ ಕೂಲಿಗಾಗಿ ಕಾಳು ಯೋಜನೆಗೆ ಬಂದಂತಹ ಲಕ್ಷಾಂತರ ಟನ್ ಅಕ್ಕಿ ಒಂದು ರೀತಿಯಲ್ಲಿ ಲೂಟಿ ಮಾಡಿ, ಹಗಲು ದರೋಡೆ ಮಾಡಿ ಹೊರದೇಶಕ್ಕೆ ಕಳುಹಿಸಿ, ಮತ್ತೊಮ್ಮೆ ಇನ್ನೊಂದು ಕನ್‌ಸೈನ್‌ಮೆಂಟ್ ಹೊರದೇಶಕ್ಕೆ ಕಳುಹಿಸುವಂತಹ ಸಂದರ್ಭದಲ್ಲಿ ಸಿಕ್ಕಿಬಿದ್ದು, ಅದರ ಬಗ್ಗೆ ಇವತ್ತು ರಾಜ್ಯದ ಉದ್ದಗಲಕ್ಕೂ ರಾಜ್ಯದ ಜನತೆ ಮಾತನಾಡುವಂತಹ ಪರಿಸ್ಥಿತಿ ಬಂದಿದೆ. ಈ ಹಿಂದೆ ನಮ್ಮ ಜೆಡಿ (ಎಸ್) ಸ್ನೇಹಿತರು ಇಲ್ಲಿ ಇದ್ದಂತಹ ಸಂದರ್ಭದಲ್ಲಿ, ಪ್ರತಿಪಕ್ಷದ ಎಲ್ಲಾ ಸದಸ್ಯರು ಒಟ್ಟಾಗಿ ನಾವು ನಿಲುವಳಿ ಸೂಚನೆ ಮೂಲಕ ಈ ವಿಷಯವನ್ನು ಈ ಮನೆಯಲ್ಲಿ ಹಾಗೂ ಆ ಮನೆಯಲ್ಲಿ ಪ್ರಸ್ತಾಪ ಮಾಡಿದ್ದೆವು. ಈ ಬಾರಿ ಸಹ ನಮ್ಮ ಪ್ರತಿಪಕ್ಷದ ಸ್ನೇಹಿತರಾದಂತಹ ಮಾನ್ಯ ಮಾಧುಸ್ವಾಮಿಯವರು, ಮಾನ್ಯ ಶ್ರೀರಾಮರೆಡ್ಡಿಯವರು ಹಾಗೂ ಮಾನ್ಯ ವಾಟಾಳ್ ನಾಗರಾಜ್‌ರವರು ಈ ಭಾಗದ ಮುಖಂಡರೆಲ್ಲ ಸೇರಿ ಒಂದು ನಿಲುವಳಿ ಸೂಚನೆಯನ್ನು ನಿಮಗೆ ಕಳುಹಿಸಿಕೊಟ್ಟಿದ್ದೇವೆ. ಬರಗಾಲ ಪೀಡಿತ ಪ್ರದೇಶದಲ್ಲಿ ಕೂಲಿಗಾಗಿ ಕಾಳು ಯೋಜನೆಯಡಿಯಲ್ಲಿ ಬಡ ಕೂಲಿ ಕಾರ್ಮಿಕರಿಗೆ ಹಂಚಲೆಂದು ಮೀಸಲಾಗಿದ್ದ ಅಕ್ಕಿ, ರಾಜ್ಯದ, ಹಾಸನ, ಮಂಗಳೂರು, ಚಿಕ್ಕಮಗಳೂರು ಹಾಗೂ ಶಿವಮೊಗ್ಗ ಮತ್ತು ಇತರೆ ಜಿಲ್ಲೆಗಳಲ್ಲಿ, ಅದು